# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 401 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಪಿ.ಹೆಚ್.ಪೂಜಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 29-01-2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಶ್ವ ಪರಂಪರೆ ತಾಣ ಪಟ್ಟದಕಲ್ಲನ್ನು ವೀಕ್ಷಣೆ ಮಾಡಲು ಪ್ರವಾಸಿಗರು ಹೆಚ್ಚುತ್ತಿದ್ದು, ಸ್ಮಾರಕಗಳನ್ನು ವೀಕ್ಷಿಸಲು ಬರುತ್ತಿರುವ ಪ್ರವಾಸಿಗರ ವಾಹನ ನಿಲುಗಡೆ ಮಾಡಲು ಪಾರ್ಕಿಂಗ್ ವ್ಯವಸ್ಥೆ ಇಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; | ಈಗಾಗಲೇ ಪಟ್ಟದಕಲ್ಲು ಪ್ರವಾಸಿ ತಾಣದಲ್ಲಿ ಲಭ್ಯವಿರುವ ಗ್ರಾಮ ಪಂಚಾಯತ್ ಜಾಗಗಳಲ್ಲಿ ಪಾರ್ಕಿಂಗ್ ಸೌಲಭ್ಯವನ್ನು ಗ್ರಾಮ ಪಂಚಾಯಿತಿ ವತಿಯಿಂದ ಒದಗಿಸಲಾಗುತ್ತಿದೆ.<br><br>ಆದಾಗ್ಯೂ, ಸರ್ಕಾರದ ಪತ್ರ ಸಂಖ್ಯೆ: ಟಿಓಆರ್/107/ಟಿಡಿಪಿ/ 2024, ದಿನಾಂಕ:26.09.2024 ರಲ್ಲಿ ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಪಟ್ಟದಕಲ್ಲಿನ ಸ್ಮಾರಕಗಳ ಎದುರಿಗೆ ಸರ್ವೆ ನಂ. 3/1 ಅ1 ಹಾಗೂ 3/1 ಅ2 ರಲ್ಲಿ ಪ್ರವಾಸೋದ್ಯಮ ಇಲಾಖೆಯ ಹೆಸರಿನಲ್ಲಿರುವ 2.31 ಎಕರೆ ಜಮೀನನ್ನು ಇಲ್ಲಿಗೆ ಭೇಟಿ ನೀಡುವ ಪ್ರವಾಸಿಗರ ಅನುಕೂಲಕ್ಕಾಗಿ ಪಾರ್ಕಿಂಗ್ ಸೌಲಭ್ಯ ಅಭಿವೃದ್ಧಿಪಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.), ಬೆಂಗಳೂರು ಇವರಿಗೆ "On a nominal lease basis" ಆಧಾರದ ಮೇಲೆ ನೀಡಲಾಗಿದ್ದು, ಅದರಂತೆ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ (ಕೆ.ಎಸ್.ಟಿ.ಡಿ.ಸಿ.), ಪ್ರವಾಸೋದ್ಯಮ ಇಲಾಖೆ, ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರಗಳ ಮಧ್ಯೆ ತ್ರಿಪಕ್ಷೀಯ ಒಪ್ಪಂದ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಆ) | ಪಟ್ಟದಕಲ್ಲಿನ ಪ್ರವಾಸೋದ್ಯಮ ಇಲಾಖೆಯಲ್ಲಿ ನಿವೇಶನ ಲಭ್ಯವಿದ್ದರೂ, ಪಾರ್ಕಿಂಗ್ ವ್ಯವಸ್ಥೆ ಆಗದೇ ಇರಲು ಕಾರಣಗಳೇನು; ಪಾರ್ಕಿಂಗ್ ವ್ಯವಸ್ಥೆಯನ್ನು ಯಾವಾಗ ಕಲ್ಪಿಸಲಾಗುತ್ತದೆ? (ಮಾಹಿತಿ ನೀಡುವುದು) | |

**TOR 27 TDV 2026**

**(ಎಚ್.ಕೆ. ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.